

ಅರುಣ ಪಿ. ಭಟ್ಟ

## ವಾರಭವಿಷ್ಯ 21.10.2021ರಿಂದ 27.10.2021ರವರೆಗೆ




ವಾರದ ಶುರುವಿನಲ್ಲಿ ಕೆಲವು ದೈಹಿಕ ಸಮಸ್ಯೆಗಳು ಎದುರಾಗಲಿವೆ. ಅನಾರೋಗ್ಯ ಸಮಸ್ಯೆ ಕೂಡ ಕಾಡಬಹುದು. ಕೌಟುಂಬಿಕ ವಿಷಯಗಳ ಬಗ್ಗೆ ಅಳೆದು ತೂಗಿ ವ್ಯವಹರಿಸಿ. ಜತೆಗೆ ಬಹಳ ತಾಳ್ಮೆ ಅಗತ್ಯ. ವಾರದ ಮಧ್ಯ ಭಾಗದಲ್ಲಿ ನಿಮ್ಮ ತಾಳ್ಮೆ ಹಾಗೂ ಸಮಾಧಾನದಿಂದಲೇ ಕೆಲವು ಶುಭ ವಿಚಾರಗಳು ನಡೆಯಲಿವೆ. ಆರೋಗ್ಯದಲ್ಲಿ ಕೂಡ ಚೇತರಿಕೆ ಕಾಣಿಸಿಕೊಳ್ಳಲಿದೆ. ಶುಭದಿನ 21. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಆರಂಭದಲ್ಲಿ ಎಂಜಿನಿಯರಿಂಗ್ ವೃತ್ತಿಯಲ್ಲಿ ಇರುವವರಿಗೆ ಬಹಳ ಉತ್ತಮ ಸಮಯ. ಅನುಭವಿ ಹಿರಿಯರಿಂದ ಅವಶ್ಯವಾದ ಜ್ಞಾನ ಸಂಪಾದನೆ ಮಾಡುತ್ತೀರಿ. ವಿದ್ಯಾರ್ಥಿಗಳಿಗೆ ತಮ್ಮ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳಲು ಬಹಳ ಉತ್ತಮವಾದ ಸಮಯ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಕುಟುಂಬಸ್ಥರಿಗೆ ನಿಮ್ಮ ಮೇಲಿನ ಪ್ರೀತಿ ಹಾಗೂ ಕಾಳಜಿ ಹೆಚ್ಚಾಗಲಿದೆ. ಶುಭದಿನ 24. ಹನುಮಾನ್ ಚಾಲೀಸ್ ಓದಿರಿ.




ವ್ಯಾಪಾರ ವ್ಯವಹಾರ ಮಾಡುವವರಿಗೆ ಉತ್ತಮ ಬೆಳವಣಿಗೆಯ ಸಮಯ. ಬಹಳ ಕಾಲದಿಂದ ಮನಸಿನಲ್ಲಿ ಇಟ್ಟುಕೊಂಡು ಬಂದ ಆಸೆ ಪೂರೈಸಿಕೊಳ್ಳಲು ಅವಕಾಶ ದೊರೆಯುತ್ತದೆ. ಈ ಅವಧಿಯಲ್ಲಿ ಸಮಸ್ಯೆಗಳ ನಿವಾರಣೆಗೆ ನಿಮಗೆ ದಾರಿ ದೊರೆಯುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ದೈನಂದಿನ ಕೆಲಸ ಕಾರ್ಯಗಳಲ್ಲಿ ಬದಲಾವಣೆಯ ಅಗತ್ಯ ಇಲ್ಲ. ಶುಭದಿನ 22. ಆಂಜನೇಯ ಉಪಾಸನೆ ಮಾಡಿರಿ.




ವಾರದ ಆರಂಭದಲ್ಲಿ ಸಾಮಾಜಿಕ, ರಾಜಕೀಯ ಸ್ಥಾನಮಾನ ಹೆಚ್ಚಿಸಿಕೊಳ್ಳುವುದಕ್ಕೆ ಹೆಚ್ಚಿನ ಶ್ರಮವನ್ನು ಹಾಕುತ್ತೀರಿ. ಬಂದ ಅವಕಾಶವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವಿರಿ. ಈ ಅವಧಿಯಲ್ಲಿ ಕುಟುಂಬವು ನಿಮ್ಮ ಬೆಂಬಲಕ್ಕೆ ಸಿದ್ಧವಾಗಿರುತ್ತದೆ. ಇನ್ನು ಕೆಮ್ಮು, ನೆಗಡಿಯಂಥ ಅನಾರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ಶುಭದಿನ 23. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗಸ್ಥರು ಬಹಳ ವೇಗವಾಗಿ ತಮ್ಮ ಪಾಲಿನ ಕೆಲಸವನ್ನು ಮಾಡಿ ಮುಗಿಸುತ್ತೀರಿ. ಮನೆಯಲ್ಲಿ ಹಣಕಾಸು ಪರಿಸ್ಥಿತಿ ಚೆನ್ನಾಗಿರದೆ ಕುಟುಂಬ ಸದಸ್ಯರು ಈ ಪರಿಸ್ಥಿತಿಗೆ ನೀವೇ ಕಾರಣ ಎಂದು ದೂರುತ್ತಾರೆ. ಪದೇ ಪದೇ ಆರೋಪ ಹೊತ್ತುಕೊಂಡು ಬೇಸರಕ್ಕೆ ಒಳಗಾಗುತ್ತೀರಿ. ಬೇರೆ ಯಾರನ್ನೂ ನಂಬಬಾರದು ಎಂದು ತೀರ್ಮಾನಕ್ಕೆ ಬರುವ ಸಾಧ್ಯತೆ ಇದೆ. ಶುಭದಿನ 21. ಸಂಕಷ್ಟ ಹರ ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಶುರುವಿನಲ್ಲಿ ಕೌಟುಂಬಿಕ ಜೀವನ ತುಂಬ ಚೆನ್ನಾಗಿರುತ್ತದೆ. ಕುಟುಂಬ ಸದಸ್ಯರ ಮೇಲೆ ನಿಮಗಿರುವ ವಿಶ್ವಾಸ ಮತ್ತಷ್ಟು ಹೆಚ್ಚಾಗುತ್ತದೆ. ಸಂಗಾತಿ ಮತ್ತು ಮಕ್ಕಳ ಜತೆಗೆ ಹೆಚ್ಚಿನ ಸಮಯ ಕಳೆಯುತ್ತೀರಿ. ಆರೋಗ್ಯವು ಉತ್ತಮವಾಗಿರುತ್ತದೆ. ಪಿತ್ರಾರ್ಜಿತ ಆಸ್ತಿ ಮೇಲೆ ಯಾರೋ ಒಬ್ಬರು ಹಕ್ಕು ಚಲಾಯಿಸುವ ಸಾಧ್ಯತೆ ಇದೆ. ಉದ್ಯಮದಲ್ಲಿ ಪ್ರಗತಿ ಸಾಧಿಸುವಿರಿ. ಶುಭದಿನ 22. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ಉತ್ಪಾದನೆ ಬಹಳ ಕಷ್ಟವಾಗುತ್ತದೆ. ಇನ್ನು ದಿನದಿನಕ್ಕೂ ಹೆಚ್ಚಾಗುತ್ತಿರುವ ಖರ್ಚನ್ನು ಕಡಿಮೆ ಮಾಡಿಕೊಳ್ಳಲು ಯೋಜನೆ ರೂಪಿಸುತ್ತೀರಿ. ಆದರೆ ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ಸಿಗುವುದು ಕಷ್ಟವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವೈವಾಹಿಕ ಜೀವನದಲ್ಲಿ ಪ್ರಗತಿ ಇದೆ. ವ್ಯಾಪಾರದ ಅಭಿವೃದ್ಧಿಗೆ ಯತ್ನಿಸುತ್ತಿರುವವರಿಗೆ ಅತ್ಯುತ್ತಮ ಅವಕಾಶಗಳು ದೊರೆಯಲಿವೆ. ಶುಭದಿನ 24. ಲಿಂಗಾಷ್ಟಕ ಪಠಿಸಿರಿ.




ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ಶುಭದಿನ 23. ಶಿವಕವಚ ಪಠಣ ಮಾಡಿರಿ.




ಮನೆಯಲ್ಲಿ ಸಂತೋಷವಾದ ವಾತಾವರಣ ಇರುತ್ತದೆ. ಈ ಅವಧಿಯಲ್ಲಿ ಉದ್ಯೋಗಸ್ಥರು ಪರಿಣಾಮಕಾರಿಯಾಗಿ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಪರಿಣಾಮಕಾರಿಯಾದ ಸಲಹೆ ಸೂಚನೆ ನೀಡಲಿದ್ದೀರಿ. ಸಂಭವನೀಯ ಅಪಾಯಗಳಿಂದ ತಪ್ಪಿಸಿಕೊಳ್ಳಲು ನಿಮ್ಮ ಪಾಲಿಗೆ ದೈವ ಬಲವಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆದಾಯದಲ್ಲಿ ಹೆಚ್ಚಳ ಆಗಲಿದೆ. ಶುಭದಿನ 22. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯಾಪಾರ ವ್ಯವಹಾರ ವಿಸ್ತರಣೆಯತ್ತ ಹೆಚ್ಚು ಗಮನ ನೀಡುತ್ತೀರಿ. ಸಣ್ಣ ಸಣ್ಣ ಬದಲಾವಣೆಗಳನ್ನು ಅಳವಡಿಸಿಕೊಳ್ಳುತ್ತಾ ದೊಡ್ಡದೊಂದು ಬದಲಾವಣೆಗೆ ಸಿದ್ಧರಾಗುತ್ತೀರಿ. ಈ ಅವಧಿಯಲ್ಲಿ ರಕ್ತದೊತ್ತಡ ಹಾಗೂ ಶ್ವಾಸಕೋಶದ ಸಮಸ್ಯೆಗಳು ಕಾಣಿಸಿಕೊಳ್ಳಬಹುದು ಅಥವಾ ಹೆಚ್ಚಾಗಬಹುದು. ಚಿಕಿತ್ಸೆ ಪಡೆಯುವುದು ಅನಿವಾರ್ಯ ಎಂಬ ಸ್ಥಿತಿ ನಿರ್ಮಾಣ ಆಗುತ್ತದೆ. ಶುಭದಿನ 25.ವಿಷ್ಣು ಸಹಸ್ರನಾಮ ಓದಿರಿ.




ವಾರದ ಆರಂಭದಲ್ಲಿ ಉದ್ಯಮಿಗಳು ತಮ್ಮ ಉತ್ಪನ್ನಗಳನ್ನು ಸ್ಥಳೀಯ ಮಾರುಕಟ್ಟೆಯಲ್ಲಿ ಹೆಚ್ಚು ಪ್ರಚಾರ ಮಾಡಲು ಸಮಯ ಮೀಸಲಿಡಲಿದ್ದೀರಿ. ನಿಮ್ಮ ಶ್ರಮಕ್ಕೆ ಸಿಗುವ ಪ್ರತಿಫಲ ವೇಗವಾಗಿ ದೊರೆಯುತ್ತಿದೆ ಎಂಬ ಅಂಶ ಗಮನಕ್ಕೆ ಬರಲಿದೆ. ವಾರದ ಮಧ್ಯ ಭಾಗದಲ್ಲಿ ಉನ್ನತ ಶಿಕ್ಷಣದಲ್ಲಿ ಉತ್ತಮ ಸಾಧನೆ ಮಾಡುವ ಅವಕಾಶಗಳಿವೆ. ಶುಭದಿನ 24. ಚಂಡಿ ಪಾರಾಯಣ ಮಾಡಿರಿ.




ವಾರದ ಶುರುವಿನಲ್ಲಿ ಆರೋಗ್ಯದ ಬಗ್ಗೆ ಅಗತ್ಯವಾದ ಕಾಳಜಿ ವಹಿಸುವುದು ಬಹಳ ಮುಖ್ಯ. ನಿಮ್ಮ ದೈನಂದಿನ ಕಾರ್ಯ ಕಲಾಪಗಳು ಹೆಚ್ಚು ಪ್ರೋತ್ಸಾಹದಾಯಕವಾಗಿ ಇರುತ್ತವೆ. ಇದರಿಂದ ನಿಮ್ಮಲ್ಲಿ ಒಂದು ಶಿಸ್ತು ಬೆಳೆಯಲಿದ್ದು, ಭವಿಷ್ಯದಲ್ಲಿ ಅನುಕೂಲ ಆಗಲಿದೆ. ವ್ಯಾಪಾರ ಉದ್ಯಮಕ್ಕೆ ಸಂಬಂಧಿಸಿದ ಒಡಂಬಡಿಕೆಯೊಂದನ್ನು ಅಂತಿಮಗೊಳಿಸಲಿದ್ದೀರಿ. ಶುಭದಿನ 22. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.